20

ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	1037
ಸದಸ್ಯರ ಹೆಸರು	:	ಶ್ರೀ. ನಿರಾಣಿ ಹಣಮಂತ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	೨೧/೦೯/೨೦೨೦
ಉತ್ತರಿಸುವ ಸಚಿವರು	:	ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು

	ಪ್ರಶ್ನೆ	ಉತ್ತರ
ಅ	ಪಟ್ಟಣ ಪಂಚಾಯಿತಿಗಳನ್ನು "ಪುರಸಭೆ" ಗಳನ್ನಾಗಿ ಮೇಲ್ದರ್ಜೆಗೇರಿಸುವಾಗ ಅನುಸರಿಸುವ ನಿಯಮಗಳೇನು;	ಪಟ್ಟಣ ಪಂಚಾಯಿತಿಯಿಂದ ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮ 1964ರ ಕಲಂ ನಿಯಮ 3(1), 3(2) ಮತ್ತು 9 ಗಳನ್ವಯ ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತದೆ: 1. ಆ ಪ್ರದೇಶದ ಜನಸಂಖ್ಯೆ 20,000 ಕ್ಕೆ ಕಡಿಮೆ ಇಲ್ಲದಂತೆ ಹಾಗೂ 50,000 ಕ್ಕೆ ಹೆಚ್ಚಿಲ್ಲದಂತಿರಬೇಕು; 2. ಅಂತಹ ಪ್ರದೇಶದ ಜನಸಂಖ್ಯೆಯ ಜನಸಾಂದ್ರತೆಯು ಆ ಪ್ರದೇಶದ ಒಂದು ಚದರ ಕಿ.ಮೀ. ವಿಸ್ತೀರ್ಣಕ್ಕೆ 1,500 ಕ್ಕಿಂತ ಕಡಿಮೆ ಇಲ್ಲದಿರುವುದು; 3. ಹಿಂದಿನ ನಿಕಟಪೂರ್ವ ಜನಗಣತಿಯಲ್ಲಿ ಅಂತಹ ಪ್ರದೇಶದಿಂದ ಸ್ಥಳೀಯ ಆಡಳಿತಕ್ಕಾಗಿ ತೆರಿಗೆ ಮತ್ತು ತೆರಿಗೆಯಲ್ಲದ ಇತರ ಸಂಪನ್ಮೂಲಗಳಿಂದ ಉತ್ಪಾದಿತವಾದ ರಾಜಸ್ವ ವಾರ್ಷಿಕ ಒಂಬತ್ತು ಲಕ್ಷ ಅಥವಾ ವಾರ್ಷಿಕ ತಲಾ ಒಬ್ಬರಿಗೆ 45 ರೂಪಾಯಿಗಳ ದರದಂತೆ ಲೆಕ್ಕಹಾಕಲಾದ ಮೊತ್ತ ಇವೆರಡರಲ್ಲಿ ಯಾವುದು ಹೆಚ್ಚೋ ಆ ಮೊತ್ತಕ್ಕಿಂತ ಕಡಿಮೆ ಇರದ ಹೊರತು; 4. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50 ಕ್ಕಿಂತ ಕಡಿಮೆ ಇಲ್ಲದಿರುವುದು.
ಆ	ಕಳೆದ 02 ವರ್ಷಗಳಲ್ಲಿ ರಾಜ್ಯಾದ್ಯಂತ ಎಷ್ಟು ಪಟ್ಟಣ ಪಂಚಾಯಿತಿಗಳನ್ನು "ಪುರಸಭೆ" ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ; (ವಿವರ ನೀಡುವುದು)	ಕಳೆದ ಎರಡು ವರ್ಷಗಳಲ್ಲಿ ಯಾವುದೇ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಿರುವುದಿಲ್ಲ.
ಇ	ಬಾಗಲಕೋಟೆ ಜಿಲ್ಲೆಯಲ್ಲಿ ಬೀಳಗಿ ಪಟ್ಟಣ ಪಂಚಾಯಿತಿಯನ್ನು "ಪುರಸಭೆ" ಯನ್ನಾಗಿ ಮೇಲ್ದರ್ಜೆಗೇರಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬೀಳಗಿ ಪಟ್ಟಣ ಪಂಚಾಯಿತಿಯನ್ನು ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸಲು ಸೂಕ್ತ ಪ್ರಸ್ತಾವನೆ ಕಳುಹಿಸುವಂತೆ ಪೌರಾಡಳಿತ ನಿರ್ದೇಶನಾಲಯದಿಂದ ಜಿಲ್ಲಾಧಿಕಾರಿಗಳು, ಬಾಗಲಕೋಟೆ ಜಿಲ್ಲೆ ರವರನ್ನು ಕೋರಲಾಗಿರುತ್ತದೆ. ಪ್ರಸ್ತಾವನೆಯು ಸ್ವೀಕೃತವಾದ ನಂತರ ನಿಯಮಾನುಸಾರ ಪರಿಶೀಲಿಸಲಾಗುವುದು.
ಈ	ಹಾಗಿದ್ದಲ್ಲಿ, ಸದರಿ ಬೀಳಗಿ ಪಟ್ಟಣ ಪಂಚಾಯಿತಿಯನ್ನು "ಪುರಸಭೆ" ಯನ್ನಾಗಿ ಮೇಲ್ದರ್ಜೆಗೇರಿಸುವಲ್ಲಿ ವಿಳಂಬ ವಾಗುತ್ತಿರುವುದಕ್ಕೆ ಕಾರಣಗಳೇನು;	ಅನ್ವಯಿಸುವುದಿಲ್ಲ
ಉ	ಯಾವ ಕಾಲಮಿತಿಯಲ್ಲಿ ಸದರಿ ಬೀಳಗಿ ಪಟ್ಟಣ ಪಂಚಾಯಿತಿಯನ್ನು "ಪುರಸಭೆ" ಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು?	

ಸಂಖ್ಯೆ:ನಅಇ 36 ಎಲ್‌ಸಿಕ್ಯೂ 2020.

(ನಾರಾಯಣ ಗೌಡ)

ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು